# ಕನ್ನಡ ಸಾಹಿತ್ಯ ಪರಿಷತ್ತು

ಪಂಪ ಮಹಾಕವಿ ರಸ್ತೆ, ಚಾಮರಾಜಪೇಟೆ, ಬೆಂಗಳೂರು – ೫೬೦ ೦೧೮

ದೂರವಾಣಿ : ೦೮೦ ೨೬೬೧೨೯೯೧, ೨೬೬೨೩೫೮೪ ಫ್ಯಾಕ್ಸ್ : ೨೬೫೨೩೮೬೭

http://www.kasapa.in e-mail : kannadaparishattu@gmail.com


---

ಕ್ರಮಸಂಖ್ಯೆ : ಕಸಾಪ / ಪತ್ರಿಕಾ/ಮಾಧ್ಯಮ ಆಹ್ವಾನ / ೨೦೨೨–೨೩ ದಿನಾಂಕ : ೧೫–೦೭–೨೦೨೨

*ಇವರಿಗೆ*

**ಸಂಪಾದಕರು / ಮುಖ್ಯ ವರದಿಗಾರರು**

...............................................ಬೆಂಗಳೂರು

## ಪತ್ರಿಕಾ/ಮಾಧ್ಯಮ ಆಹ್ವಾನ

## ಡಾ|| ಹೆಚ್. ವಿಶ್ವನಾಥ ಮತ್ತು ಶ್ರೀಮತಿ ಎಂ.ಎಸ್. ಇಂದಿರಾ

## ದತ್ತಿ ಪ್ರಶಸ್ತಿ ಪ್ರದಾನ ಸಮಾರಂಭ

**ಕನ್ನಡ ಸಾಹಿತ್ಯ ಪರಿಷತ್ತು, ಅಖಿಲ ಕರ್ನಾಟಕ ಮಕ್ಕಳ ಕೂಟ (ರಿ.),** ಬೆಂಗಳೂರು ಇವರು ಸಹಭಾಗಿತ್ವದಲ್ಲಿ **ದಿನಾಂಕ ೧೬-೦೭-೨೦೨೨ರ ಶನಿವಾರದಂದು ಸಂಜೆ ೫.೩೦ಕ್ಕೆ ಕನ್ನಡ ಸಾಹಿತ್ಯ ಪರಿಷತ್ತಿನ ಕುವೆಂಪು ಸಭಾಂಗಣದಲ್ಲಿ ಡಾ|| ಹೆಚ್. ವಿಶ್ವನಾಥ ಮತ್ತು ಶ್ರೀಮತಿ ಎಂ.ಎಸ್. ಇಂದಿರಾ ದತ್ತಿ ಪ್ರಶಸ್ತಿ ಪ್ರದಾನ ಸಮಾರಂಭ**ವನ್ನು ಆಯೋಜಿಸಲಾಗಿದೆ.

**ವಿಸ್ತಾರ ನ್ಯೂಸ್ ಮುಖ್ಯ ಸಂಪಾದಕರಾದ ಶ್ರೀ ಹರಿಪ್ರಕಾಶ್ ಕೋಣೆಮನೆ** ಅವರು ಈ ಸಮಾರಂಭವನ್ನು ಉದ್ಘಾಟಿಸಲಿದ್ದಾರೆ. ಮೇಲ್ಕಂಡ ೨೦೨೨ನೆಯ ಸಾಲಿನ ಈ ದತ್ತಿ ಪ್ರಶಸ್ತಿಗೆ **ಶ್ರೀ ರಮೇಶ್ ಮುದಿಗೆರೆ** ಅವರು ಭಾಜನರಾಗಿದ್ದಾರೆ. **ರಾಜ್ಯ ಅಂಗವಿಕಲರ ಹಾಗೂ ಹಿರಿಯ ನಾಗರಿಕರ ಸಬಲೀಕರಣ ಇಲಾಖೆ ನಿರ್ದೇಶಕರಾದ ಶ್ರೀಮತಿ ಲತಾಕುಮಾರಿ** ಅವರು ಪುರಸ್ಕೃತರಿಗೆ ಪ್ರಶಸ್ತಿ ಪ್ರದಾನ ಮಾಡಲಿದ್ದಾರೆ. **ಅಖಿಲ ಕರ್ನಾಟಕ ಮಕ್ಕಳ ಕೂಟ (ರಿ.), ಇದರ ಅಧ್ಯಕ್ಷರಾದ ಶ್ರೀ ಕೆ. ಮೋಹನ್‌ದೇವ್ ಆಳ್ವ ಹಾಗೂ ರಮಣ ಮಹ ಋಷಿ ಅಂಧರ ಅಕಾಡೆಮಿಯ ಸಂಸ್ಥಾಪಕರಾದ ಶ್ರೀ ಟಿ.ವಿ. ಶ್ರೀನಿವಾಸನ್** ಅವರುಗಳು ಕಾರ್ಯಕ್ರಮದ ಮುಖ್ಯ ಅತಿಥಿಗಳಾಗಿ ಭಾಗವಹಿಸಲಿದ್ದಾರೆ. **ದತ್ತಿ ದಾನಿಗಳಾದ ಡಾ. ಎಚ್. ವಿಶ್ವನಾಥ** ಅವರು ಸಮಾರಂಭದಲ್ಲಿ ಉಪಸ್ಥಿತರಿರಲಿದ್ದಾರೆ. **ಕನ್ನಡ ಸಾಹಿತ್ಯ ಪರಿಷತ್ತಿನ ಮಾನ್ಯ ಅಧ್ಯಕ್ಷರಾದ ನಾಡೋಜ ಡಾ. ಮಹೇಶ ಜೋಶಿ** ಅವರು ಸಮಾರಂಭದ ಅಧ್ಯಕ್ಷತೆ ವಹಿಸಲಿದ್ದಾರೆ.

ಈ ಸಮಾರಂಭದಲ್ಲಿ, ಸಾಹಿತಿಗಳು, ಗಣ್ಯರು ಭಾಗವಹಿಸಲಿದ್ದಾರೆ. ಈ ಸಭೆಯಲ್ಲಿ ಮೂಡಿಬರುವ ವಿಚಾರಗಳನ್ನು ನಾಡಿನ ಜನತೆಗೆ ತಿಳಿಸಲು ತಮ್ಮ ಪತ್ರಿಕೆಯ ವರದಿಗಾರರು ಹಾಗೂ ಛಾಯಾಗ್ರಾಹಕರನ್ನು ಕಳುಹಿಸಿಕೊಡಬೇಕಾಗಿ ವಿನಂತಿ.

ಇದರೊಂದಿಗೆ ಆಹ್ವಾನಪತ್ರಿಕೆ ಲಗತ್ತಿಸಿದೆ.

**ಶ್ರೀನಾಥ್ ಜೆ.**

ಮಾಧ್ಯಮ ಸಲಹೆಗಾರರು

ಕನ್ನಡ ಸಾಹಿತ್ಯ ಪರಿಷತ್ತು, ಬೆಂಗಳೂರು